ತುಮಕೂರು ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ.

360(634) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ತುಮಕೂರು ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) ತುಮಕೂರು ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು 1996-97ನೇ ಸಾಲಿನಲ್ಲಿ ಕೈಗೊಂಡಿರುವ ಕ್ರಮಗಳು ಮತ್ತು ಜನವರಿ 97ರವರೆಗಿನ ಸಾಧನೆ ಈ ಕೆಳಕಂಡಂತೆ ಇರುತ್ತದೆ.

ಶ್ರೀ ಎಂ.ಪಿ.ಪ್ರಕಾಶ್ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು

ಕ್ರಸಂ.	ಯೋಜನೆಗಳು	ಜಿ.ಪ.ಇಂ. ವಿಭಾಗ ತುಮಕೂರು		ಜಿ.ಪ.ಇಂ. ವಿಭಾಗ ಮಧುಗಿರಿ		ಒಟ್ಟು	
		ಗುರಿ	ಸಾಧನೆ	ಗುರಿ	ಸಾಧನೆ	ಗುರಿ	ಸಾಧನೆ
1.	ಕೊಳಾಯಿನೀರು ಸರಬರಾಜು	23	11	20	11	43	22
2.	ಕಿರುನೀರು ಸರಬರಾಜು	45	26	52	33	97	59
3.	ಕೊಳವೆಬಾವಿಗಳು	121	97	130	120	251	217

ಇದಲ್ಲದೆ, ಜಿಲ್ಲಾ ಪಂಚಾಯತ್‌ನ ಅಭಾವ ಪರಿಹಾರ ಅನುದಾನದಡಿಯಲ್ಲಿ ಜಿ.ಪಂ. ಇಂಜಿನಿಯರಿಂಗ್ ವಿಭಾಗ, ತುಮಕೂರು ವ್ಯಾಪ್ತಿಯಲ್ಲಿ 28 ಕಿರುನೀರು ಸರಬರಾಜು ಯೋಜನೆಗಳನ್ನು ಮತ್ತು 122 ಕೈ ಪಂಪು ಕೊಳವೆ ಬಾವಿಗಳನ್ನು ಹಾಗೂ ಜಿ.ಪಂ.ಇಂ.ವಿಭಾಗ, ಮಧುಗಿರಿ ವ್ಯಾಪ್ತಿಯಲ್ಲಿ 25 ಕೈಪಂಪು ಕೊಳವೆ ಬಾವಿಗಳನ್ನು ಪೂರ್ಣಗೊಳಿಸಲಾಗಿದೆ.

ರಾಜ್ಯದಲ್ಲಿ ನೂತನ ಪ್ರಥಮ ದರ್ಜೆ ಕಾಲೇಜುಗಳ ಆರಂಭಿಸುವ ಪ್ರಸ್ತಾವನೆ

361(638) ಶ್ರೀಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದಲ್ಲಿ ನೂತನ ಪ್ರಥಮ ದರ್ಜೆ ಕಾಲೇಜುಗಳನ್ನು ಆರಂಭಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ ಅಂತಹ ಕಾಲೇಜುಗಳನ್ನು ಪ್ರಾರಂಭಿಸಲು ಪಾಲಿಸುವ ಸೂತ್ರಗಳೇನು?